(ಅನುಬಂಧ–IV)

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಊ) ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2006

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2006ರ ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಬಿ. ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

(ಅನುಬಂಧ–V)

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ii) ವಿಧೇಯಕಗಳನ್ನೂ ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಪರ್ಯಾಲೋಚನಾ ಪ್ರಸ್ತಾವ

(ಅ) 2006ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ.

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.'

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ಪ್ರಸ್ತಾವನೆ ಏನೆಂದರೆ,

"2006ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಹಾಗೂ 3